# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಾಮಾನ್ಯ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಶಾಲಾ ಮಕ್ಕಳಿಂದ ಪ್ರತಿಭಾ ಕಾರಂಜಿ ಕಾರ್ಯಕ್ರಮದ ಮೂಲಕ ಅರಿವು ಮೂಡಿಸುವ ಬಗ್ಗೆ.

**ಓದಲಾಗಿದೆ :**

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ:28/03/2012.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 29/11/2012.
3. ಅಪರ ಮುಖ್ಯ ಕಾರ್ಯದರ್ಶಿರವರ ಕಛೇರಿಯ ಟಿಪ್ಪಣಿ ಸಂಖ್ಯೆ: ಅಮುಕಾ 570/13, ದಿನಾಂಕ: 30.09.2013 ಮತ್ತು ದಿನಾಂಕ:21.10.2013.
4. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರ ಪತ್ರ ಸಂಖ್ಯೆ: ನೃನಾ.ವಿಭಾಗ-ಸಕಾಲ.ಕಾ.ಅ.5/2013-14, ದಿನಾಂಕ: 30.09.2013 ಮತ್ತು 30/10/2013.

**ಪ್ರಸ್ತಾವನೆ :**

ಮೇಲೆ ಓದಲಾದ (1) ರ ಅಧಿಸೂಚನೆಯಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ 2011 ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ(2) ರ ಅಧಿಸೂಚನೆಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಸಂಬಂಧ ಸರ್ಕಾರದ ಕ್ರಮಾಂಕ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012 ರ ಅಧಿಸೂಚನೆ-1 ರ ತಿದ್ದುಪಡಿ ಅಧಿಸೂಚನೆಯಲ್ಲಿ ಸೇರಿಸಿರುವ ಹೆಚ್ಚುವರಿ ಸೇವೆಗಳಲ್ಲಿ 12 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ದಿನಾಂಕ: 3ನೇ ಡಿಸೆಂಬರ್ 2012 ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ. ಮುಂದುವರೆದು, "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011"ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಸರ್ಕಾರದ 44 ಇಲಾಖೆ/ಸಂಸ್ಥೆಗಳ 419 ಸೇವೆಗಳನ್ನು ಸಕಾಲದಡಿಯಲ್ಲಿ ತರಲಾಗಿದೆ.

ಮೇಲೆ ಓದಲಾದ (3) ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರು ಸೂಚನೆಯಲ್ಲಿ ಸಕಾಲ ಸೇವೆಗಳ ಬಗ್ಗೆ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಲು ಶಾಲಾ ಮಕ್ಕಳಿಂದ ಪ್ರತಿಭಾ ಕಾರಂಜಿ ಕಾರ್ಯಕ್ರಮದ ಮೂಲಕ ಅರಿವು ಮೂಡಿಸುವ ಸಂಬಂಧ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಪ್ರಸ್ತಾವನೆಯನ್ನು ಪಡೆದು ಕ್ರಮ ಕೈಗೊಳ್ಳುವಂತೆ ಸೂಚಿಸಿರುತ್ತಾರೆ.

ಮೇಲೆ ಓದಲಾದ (4) ರಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಸ್ವೀಕೃತವಾಗಿರುವ ಪ್ರಸ್ತಾವನೆಯಲ್ಲಿ ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಸ್ಪರ್ಧಾ ಕಾರ್ಯಕ್ರಮ ರೂಪಿಸಿ ಅವರಿಂದ ಬರಬಹುದಾದ ಉತ್ತಮ 1) ನಾಟಕ 2) ಲಾವಣಿ ಪದ 3) ಚಿತ್ರ ಬರಹ ಹಾಗೂ 4) ಭಾಷಣ ಸ್ಪರ್ಧೆ ನಡೆಸುವ ಸಂಬಂಧ ಕ್ರಿಯಾ ಯೋಜನೆಯ ಪಟ್ಟಿಯನ್ನು ತಯಾರಿಸಿ ಕಳುಹಿಸಿರುತ್ತಾರೆ. ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿದೆ ಹಾಗೂ ನಾಟಕ ಮತ್ತು ಚಿತ್ರಬರಹ ಸ್ಪರ್ಧಾ ವಿಷಯವನ್ನು ಆಯ್ಕೆ ಮಾಡಲಾಗಿದೆ. ಊಟ ಹಾಗೂ ಇತರೆ ವೆಚ್ಚವನ್ನು ಈಗಾಗಲೇ ಪ್ರತಿಭಾ ಕಾರಂಜಿ ಕಾರ್ಯಕ್ರಮದಡಿ ವ್ಯವಸ್ಥೆ ಮಾಡಿರುವಂತೆಯೇ ಕ್ರಮ ಕೈಗೊಳ್ಳುವುದು. ಸಕಾಲದ ವಿಷಯವಾಗಿ ನಾಟಕ ಹಾಗೂ ಚಿತ್ರಬರಹವು ಪ್ರತಿಭಾ ಕಾರಂಜಿ ಯೋಜನೆಯಡಿ ಒಂದು ಭಾಗವಾಗಿರುವುದರಿಂದ ಇದಕ್ಕೆ ಸಂಬಂಧಿಸಿದಂತೆ ನಾಟಕ ಹಾಗೂ ಚಿತ್ರಬರಹ ಸ್ಪರ್ಧೆಗಳಿಗೆ ತಾಲ್ಲೂಕು ಹಂತ, ಜಿಲ್ಲಾ ಹಂತ ಹಾಗೂ ರಾಜ್ಯ ಹಂತಗಳಲ್ಲಿ ತಗಲುವ ವೆಚ್ಚ ಹಾಗೂ ಇದೇ ರೀತಿ ತೀರ್ಪುಗಾರರ ಸಂಭಾವನೆಯನ್ನು ಮಾತ್ರ ಸಕಾಲ ಮಂಡಳಿಯಿಂದ ಭರಿಸಲು ತೀರ್ಮಾನಿಸಿದೆ. ವಿವರಣೆ ಈ ಕೆಳಕಂಡಂತಿದೆ.

## ಪ್ರೌಢಶಾಲೆ 08 ರಿಂದ 10ನೇ ತರಗತಿವರೆಗೆ

| ತಾಲ್ಲೂಕು ಹಂತ | | | ಜಿಲ್ಲಾ ಹಂತ | ರಾಜ್ಯ ಹಂತ |
|---|---|---|---|---|
| ಕ್ರ.ಸಂ | ಸ್ಪರ್ಧಾ ವಿಷಯ | ಒಟ್ಟು ಮೊತ್ತ | ಒಟ್ಟು ಮೊತ್ತ | ಒಟ್ಟು ಮೊತ್ತ |
| 01 | ನಾಟಕ<br>4,500x203=9,13,500 | 9,13,500.00 | 6,500x34=2,21,000.00 | 22,000x1 (ಶಿಕ್ಷಣ)=22,000.00 |
| 02 | ಚಿತ್ರಬರಹ<br>4,500x203=9,13,500 | 9,13,500.00 | 6,500x34=2,21,000.00 | 22,000x1 (ಶಿಕ್ಷಣ)=22,000.00 |
| 03 | ತೀರ್ಪುಗಾರರ ಸಂಭಾವನೆ<br>02x03x500=3000.00 | 3000.00 | 3000.00 | 3000.00 |
| ಒಟ್ಟು | | 18,30,000.00 | 4,45,000.00 | 47,000.00 |
| ಇಪ್ಪತ್ತಮೂರು ಲಕ್ಷದ ಇಪ್ಪತ್ತೆರಡು ಸಾವಿರ ರೂಪಾಯಿಗಳು ಮಾತ್ರ | | | | |

ಅದರಂತೆ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 222 ಸಾಸೇಖಾ 2013**

**ಬೆಂಗಳೂರು, ದಿನಾಂಕ: 30/10/2013.**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದ ನಾಟಕ, ಚಿತ್ರಬರಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಕೆ.ಟಿ.ಪಿ.ಪಿ. ಕಾಯ್ದೆಯನ್ನು ಪಾಲಿಸುವ ಷರತ್ತಿಗೊಳಪಟ್ಟು, ಸಾರ್ವಜನಿಕ ಶಿಕ್ಷಣ ಇಲಾಖೆಗೆ ಈ ಕೆಳಕಂಡಂತೆ ಅನುದಾನವನ್ನು ಬಿಡುಗಡೆ ಮಾಡಲು ಮಂಜೂರಾತಿ ನೀಡಲಾಗಿದೆ.

| ಕ್ರ.ಸಂ | ಸ್ಪರ್ಧಾ ವಿಷಯ | ಮೊತ್ತ |
|---|---|---|
| 01 | ನಾಟಕ | 11,56,500.00 |
| 02 | ಚಿತ್ರಬರಹ | 11,56,500.00 |
| 03 | ತೀರ್ಪುಗಾರರ ಸಂಭಾವನೆ | 9,000.00 |
| ಒಟ್ಟು | | 23,22,000.00 |
| (ಇಪ್ಪತ್ತಮೂರು ಲಕ್ಷದ ಇಪ್ಪತ್ತೆರಡು ಸಾವಿರ ರೂಪಾಯಿಗಳು ಮಾತ್ರ) | | |

ಸದರಿ ಆದೇಶವನ್ನು 2013-14 ನೇ ಸಾಲಿನ ಲೆಕ್ಕ ಶೀರ್ಷಿಕೆ 2052-00-090-0-26-051 (ಯೋಜನೇತರ) ಅಡಿಯಲ್ಲಿ ಒದಗಿಸಲಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು ಮತ್ತು ಸಂಬಂಧಿಸಿದ ಇಲಾಖೆಯ ಅಧಿಕಾರಿಗೆ ಹಣ ಸೆಳೆಯುವ ಅಧಿಕಾರ ನೀಡಲಾಗಿದೆ.

ಈ ಆದೇಶವನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ: ಅಮುಕಾ 570/13, ದಿನಾಂಕ: 30.09.2013, 21.10.2013ರ ಅನುಮೋದನೆಯಂತೆ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2012, ದಿನಾಂಕ:27/04/2012 ಹಾಗೂ ಎಫ್.ಡಿ 01 ಟಿಎಫ್‌ಪಿ 2013, ದಿನಾಂಕ: 20.04.2013ರ ಸರ್ಕಾರದ ಆದೇಶಗಳಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

30/10/13
(ಟಿ.ಎನ್. ವರಪ್ರಸಾದ್ ರೆಡ್ಡಿ)
ಆಡಳಿತಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ನಾಗರೀಕ ಸೇವೆಗಳು)

<u>ಇವರಿಗೆ :</u>

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕಪತ್ರ)/(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
10. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಸಿಆಸುಇ (ಆಸು), ಬಹುಮಹಡಿ ಕಟ್ಟಡ, ಬೆಂಗಳೂರು.
11. ಆಡಳಿತಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರ ಅಧೀನ ಕಾರ್ಯದರ್ಶಿಗಳು, ಸಕಾಲ ಮಂಡಳಿ, ಸಿಆಸುಇ (ಆಸು), ಬೆಂಗಳೂರು.
12. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು
13. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.

ಹೊರಡಿಸಿದೆ